# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 196
2. ಸದಸ್ಯರ ಹೆಸರು : ಶ್ರೀ. ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 06.07.2023
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ/ನಿಗಮ ಮಂಡಳಿಗಳಲ್ಲಿ 2 ಲಕ್ಷಕ್ಕೂ ಅಧಿಕ ಹುದ್ದೆಗಳಿದ್ದು, ಇದರಿಂದ ಆಡಳಿತಾತ್ಮಾಕ ಸಮಸ್ಯೆಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲಾಖೆಗಳಿಗೆ ನಿಗಧಿಪಡಿಸಿದ ಕೆಲಸಗಳನ್ನು ನಿರ್ವಹಿಸಲು ವಿವಿಧ ವೃಂದದ ಹುದ್ದೆ ಮತ್ತು ಹುದ್ದೆಗಳ ವೃಂದಬಲ ಬಹಳ ಹಿಂದೆ ನಿಗಧಿಪಡಿಸಲಾಗಿತ್ತು.<br>ಪ್ರಸುತ ರಾಜ್ಯ ಸರ್ಕಾರದ ಬಹುತೇಕ ಇಲಾಖೆಗಳಲ್ಲಿ ಇ- ಆಡಳಿತ ಮೂಲಕ ಕಡತಗಳ ನಿರ್ವಹಣೆ ಮಾಡಲಾಗುತ್ತಿದೆ ಮತ್ತು ಸಾರ್ವಜನಿಕರಿಗೆ ರಾಜ್ಯ ಸರ್ಕಾರದ ಸೇವೆಗಳನ್ನು ತಲುಪಿಸಲು ಮಾಹಿತಿ ಮತ್ತು ತಂತ್ರಜ್ಞಾನದ (ICT) ಬಳಕೆ ಮಾಡಿಕೊಳ್ಳಲಾಗುತ್ತಿದೆ. ಅಲ್ಲದೆ, ಹೊಸದಾಗಿ ನೇಮಕವಾಗುವ ಎಲ್ಲಾ ಸಿಬ್ಬಂದಿಗೆ ಕಂಪ್ಯೂಟರ್ ಪರೀಕ್ಷೆಯಲ್ಲಿ ಪಾಸು ಮಾಡುವುದು ಕಡ್ಡಾಯ ಮಾಡಲಾಗಿದೆ.<br>ಜೊತೆಗೆ, ಆಡಳಿತ ಸುಧಾರಣ ಆಯೋಗ ಮತ್ತು ವೇತನ ಆಯೋಗವು ಕಾರ್ಯಕಾರಿ ಹುದ್ದೆಗಳ ಭರ್ತಿಗೆ ಆದ್ಯತೆ ನೀಡಿ ಪೂರಕ ಸಿಬ್ಬಂದಿ ಅಂದರೆ ಲಿಪಿಕ ವೃಂದದ ಹುದ್ದೆಗಳ ಸಂಖ್ಯೆ ಕಡಿಮೆ ಮಾಡಲು ಹಲವಾರು ಬಾರಿ ಶಿಫಾರಸ್ಸು ಮಾಡಿರುತ್ತದೆ.<br>ಮೇಲಿನ ಅಂಶಗಳ ಹಿನ್ನಲೆಯಲ್ಲಿ, ವಿವಿಧ ವೃಂದದ ಹುದ್ದೆ ಮತ್ತು ಹುದ್ದೆಗಳ ವೃಂದಬಲ ಪರಿಷ್ಕರಿಸಬೇಕಾಗುತ್ತದೆ. ಲಿಪಿಕ ವೃಂದದ ಹುದ್ದೆಗಳ ಪೈಕಿ ಬೆರಳಚ್ಚುಗಾರರು, ಶೀಘ್ರಲಿಪಿಗಾರರು, ವಾಹನ ಚಾಲಕರ ಮತ್ತು ಗ್ರೂಪ್-ಡಿ ವೃಂದಗಳ ಮತ್ತು ವೃಂದ ಬಲದ ಪರಿಷ್ಕರಣೆ ಬಗ್ಗೆ ಪರಿಶೀಲಿಸಬೇಕಾಗುತ್ತದೆ.<br>ಸರ್ಕಾರವು ಒದಗಿಸುವ ಸೇವೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಮಾಹಿತಿ ಮತ್ತು ತಂತ್ರಜ್ಞಾನದ (ICT) ಬಳಕೆ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ಸರಳವಾಗಿ ಹಾಗೂ ಸುಲಭವಾಗಿ ಸರ್ಕಾರದ ಸೇವೆಗಳನ್ನು ಪರಿಣಾಮಕಾರಿಯಾಗಿ ಮತ್ತು ಕಾಲಮಿತಿಯೊಳಗೆ ಒದಗಿಸಲು ಸಾಧ್ಯವಾಗುತ್ತದೆ.<br>2023-24ನೇ ಸಾಲಿನ ರಾಜ್ಯ ಸರ್ಕಾರದ ಇಲಾಖೆಗಳ ಇಲಾಖಾವಾರು ಮಂಜೂರಾದ, ಖಾಲಿಯಿರುವ ಹಾಗೂ |
| ಆ | ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮತ್ತು ನಿಗಮ ಮಂಡಳಿಗಳಲ್ಲಿ ಮಂಜೂರಾದ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; | |
| ಇ | ಪ್ರಸಕ್ತ ಯಾವ ಯಾವ ಇಲಾಖೆಯ ಯಾವ ಹುದ್ದೆಗಳಿಗೆ ನೇಮಕಾತಿಯ ಪ್ರಸ್ತಾವನೆಯು ಸರ್ಕಾರದ ಮುಂದಿರುತ್ತದೆ; | |
| ಈ | ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ನಿಲುವೇನು; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿಗಳನ್ನು ಕೈಗೊಳ್ಳಲಾಗುತ್ತದೆ? | |

| | | |
|---|---|---|
| | | ಭರ್ತಿಯಾಗಿರುವ ವಿವರಗಳನ್ನು ಅನುಬಂಧದಲ್ಲಿ ನೀಡಿದೆ. ನಿಗಮ ಮಂಡಳಿಗಳ ಮಂಜೂರಾದ, ಖಾಲಿಯಿರುವ ಹಾಗೂ ಭರ್ತಿಯಾಗಿರುವ ಮಾಹಿತಿ ಆಯಾ ಆಡಳಿತ ಇಲಾಖೆಗಳ ಬಳಿ ಇರುತ್ತದೆ. ಆರ್ಥಿಕ ಇಲಾಖೆಯಲ್ಲಿ ಲಭ್ಯವಿರುವುದಿಲ್ಲ.<br><br>ಇಲಾಖೆಯಲ್ಲಿನ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಎಂದು ಗುರುತಿಸಲಾಗಿದೆ. ಇವುಗಳ ಪೈಕಿ ಮುಂಬಡ್ತಿ ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ಇಲಾಖೆಗಳಿಗೆ ಅಧಿಕಾರವಿರುತ್ತದೆ. ಅಂದರೆ ಆರ್ಥಿಕ ಇಲಾಖೆಯ ಅನುಮತಿ ಅವಶ್ಯಕತೆ ಇರುವುದಿಲ್ಲ. ನೇರ ನೇಮಕಾತಿ ಹುದ್ದೆಗಳಿಗೆ ಸಂಬಂಧಿಸಿದಂತೆ, ಪ್ರತಿ ಇಲಾಖೆಗೆ ನಿಗದಿಪಡಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅವಶ್ಯವಿರುವ ಸಿಬ್ಬಂದಿಯನ್ನು ಭರ್ತಿ ಮಾಡಲು ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ವೃಂದವಾರು ಪರಿಶೀಲಿಸಿ, ಅನುಮತಿ ನೀಡಲಾಗುತ್ತಿದೆ.<br><br>ಕಲ್ಯಾಣ ಕರ್ನಾಟಕ ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021 ರನ್ವಯ ಶೇ. 80 ರಷ್ಟು ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡಿಕೊಳ್ಳಲು ಆಡಳಿತ ಇಲಾಖೆಯ ಹಂತದಲ್ಲಿಯೇ ಪರಿಶೀಲಿಸಿ ನೇಮಕಾತಿ ಮುಂದುವರೆಸಲು ಸಹಮತಿ ನೀಡಿದೆ.<br><br>ಅನುಕಂಪ ಆಧಾರದ ನೇಮಕಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 05 ಬಿಇಎಂ 2020, ದಿನಾಂಕ 12.01.2021ರನ್ವಯ ಆಡಳಿತ ಇಲಾಖೆಗೆ ಅಧಿಕಾರ ನೀಡಿ ಸಹಮತಿ ನೀಡಿದೆ.<br><br>ಬ್ಯಾಕ್ ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021 ದಿನಾಂಕ 4.07.2022ರ ಸೂಚನೆಯನ್ವಯ ಕ್ರಮಕೈಗೊಳ್ಳಲು ತಿಳಿಸಿದೆ.<br><br>ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ, ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ, ಅಗತ್ಯತೆಗೆ ಅನುಗುಣವಾಗಿ ಹುದ್ದೆಗಳ ಭರ್ತಿಗೆ ಸಹಮತಿ ನೀಡಲಾಗುತ್ತಿದೆ.<br><br>ಈಗಾಗಲೇ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ 15,000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಹಾಗೂ ಬಿಬಿಎಂಪಿಯಲ್ಲಿ 24005 ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಸಿಆಸು ಇಲಾಖೆಯ ದಿನಾಂಕ: 26.07.2005ರ ಸುತ್ತೋಲೆ ಅನ್ವಯ |

| | | |
|---|---|---|
| | | ಗ್ರೂಪ್-ಸಿ ವೃಂದದ ಕೆಲವು ಹುದ್ದೆ (ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ವಾಹನ ಚಾಲಕರು) ಮತ್ತು ಗ್ರೂಪ್-ಡಿ ವೃಂದಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ತಿಳಿಸಲಾಗಿದೆ. ಅದರಂತೆ, ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ, ಅಂದಾಜು 75,474 ಹುದ್ದೆಗಳನ್ನು (ಶೀಘ್ರಲಿಪಿಗಾರರು, ಬೆರಳಚ್ಚುಗಾರರು ವಾಹನ ಚಾಲಕರು ಮತ್ತು ಗ್ರೂಪ್-ಡಿ) ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ. |

ಸಂಖ್ಯೆ: ಆಇ 31 ಬಿಜಿಎಲ್ 2023

( ಸಿದ್ದರಾಮಯ್ಯ)
ಮುಖ್ಯಮಂತ್ರಿ